**ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಮೈಸೂರು, ಹುಣಸೂರು ಪೀಠ.**

**SC No**.202/2021

**PW**. 6

**CW**. 10

**ಸಾಕ್ಷಿಯ ಹೆಸರು –ಪುಟ್ಟೇಗೌಡ**

**ತಂದೆಯ ಹೆಸರು –ಮಲ್ಲೇಗೌಡ**

**ವಯಸ್ಸು –76 ವರ್ಷಗಳು**

ದಿನಾಂಕ 31–12–2024 ರಂದು ಪ್ರಮಾಣವಚನ ಬೋಧಿಸಲಾಯಿತು.

**ಉದ್ಯೋಗ –ವ್ಯವಸಾಯ**

**ವಾಸಸ್ಥಳ –ಸಣ್ಣೇಗೌಡರ ಕಾಲೋನಿ, ಹುಣಸೂರು ತಾಃ**

**ಮುಖ್ಯ ವಿಚಾರಣೆಃ– ಸರ್ಕಾರಿ ಅಭಿಯೋಜಕರಿಂದಃ–**

ಈಗ್ಗೆ ಸುಮಾರು 4 ವರ್ಷಗಳ ಹಿಂದೆ ಪೊಲೀಸರು 1 ನೇ ಆರೋಪಿಯ ಮನೆಯ ಬಳಿ ಬಂದು, ಪಂಚನಾಮೆ ಮಾಡಿ, 1 ನೇ ಆರೋಪಿಯು ಹಾಜರು ಮಾಡಿದ ಕೃತ್ಯಕ್ಕೆ ಬಳಸಿದ ಒಂದು ಮಚ್ಚನ್ನು ಜಪ್ತಿ ಮಾಡಿ, ನನ್ನ ಸಹಿ ಪಡೆದಿರುತ್ತಾರೆ. ಸದರಿ ಪಂಚನಾಮೆಯನ್ನು ಈಗ ನೋಡುತ್ತಿದ್ದು, ಈಗಾಗಲೇ ನಿಪಿ–10 ಎಂದು ಗುರುತಿಸಿದ್ದು, ಸಾಕ್ಷಿಪಯ ಸಹಿಯನ್ನು ನಿಪಿ–10(ಬಿ) ಎಂದು ಗುರುತಿಸಲಾಯಿತು. ಪಂಚನಾಮೆ ಕಾಲಕ್ಕೆ ಪೊಲೀಸರು ಸ್ಥಳದಲ್ಲಿ ಛಾಯಾಚಿತ್ರಗಳನ್ನು ತೆಗೆದಿದ್ದು , ಅದರಲ್ಲಿ ನಾನು ಇದ್ದೇನೆ. ಸದರಿ ಫೋಟೋಗಳನ್ನು ಈಗಾಗಲೇ ನಿಪಿ–11 ಹಾಗೂ 12 ಎಂದು ಗುರುತಿಸಲಾಗಿದೆ. 1 ನೇ ಆರೋಪಿ ಹಾಜರು ಮಾಡಿದ ಮಚ್ಚನ್ನು ಈಗ ನ್ಯಾಯಾಲಯದ ಮುಂದೆ ನೋಡುತ್ತಿದ್ದು , ಅದನ್ನು ಈಗಾಗಲೇ ಮು.ಮಾ–1 ಎಂದು ಗುರುತಿಸಲಾಗಿದೆ.

**SC No.202/2021**
**PW.6**

**ಪಾಟೀಸವಾಲುಃ- ಆರೋಪಿತರ ಪರ ಶ್ರೀ ಆರ್ ಎಸ್ ಎಂ ವಕೀಲರಿಂದಃ-**

ಗಾಯಾಳು ಜಯಣ್ಣನಿಗೆ ನಾನು ಸೋದರ ಮಾವನಾಗಬೇಕು ಎಂದರೆ ಸರಿ. ಪಂಚನಾಮೆ ಕಾಲಕ್ಕೆ ನಾನು ಇದ್ದು, ಬೇರೆ ಯಾರಿದ್ದರು ಎಂದು ನನಗೆ ಗೊತ್ತಿಲ್ಲ. ಪಂಚನಾಮೆಗೆ ಬರಲು ಪೊಲೀಸರು ನೋಟೀಸಿ ನೀಡಿರಲಿಲ್ಲ ಎಂದರೆ ಸರಿ. ಪೊಲೀಸರ ಕೋರಿಕೆಯ ಮೇರೆಗೆ ಪಂಚನಾಮೆಗೆ ಸಹಿ ಮಾಡಿದ್ದೇನೆ ಎಂದರೆ ಸರಿ. ನಿಪಿ-10 ರ ಪಂಚನಾಮೆಯಲ್ಲಿ ಬರೆದಿರುವ ವಿಚಾರ ನನಗೆ ಗೊತ್ತಿಲ್ಲ ಎಂದರೆ ಸರಿ. ಮು.ಮಾ-1 ಅನ್ನು ಈ ದಿನ ನ್ಯಾಯಾಲಯದಲ್ಲಿ ಮೊದಲ ಬಾರಿಗೆ ನೋಡುತ್ತಿದ್ದೇನೆ ಎಂದರೆ ಸರಿ. ಛಾಯಾಚಿತ್ರಗಳನ್ನು ಯಾರು ತೆಗೆದಿರುತ್ತಾರೆ ನನಗೆ ಗೊತ್ತಿಲ್ಲ ಎಂದರೆ ಸರಿ . ಪಂಚನಾಮೆಯ ಬಗ್ಗೆ ಏನು ಮಾಹಿತಿ ಇಲ್ಲದಿದ್ದರೂ ಕೂಡ ಜಯಣ್ಣ ನಮ್ಮ ಸಂಬಂಧಿಯಾದ ಕಾರಣ ಆತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಮರುವಿಚಾರಣೆಃ** ಇಲ್ಲ.

**ನನ್ನ ಉಕ್ತಲೇಖನದ ಮೇರೆಗೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.**

ಓ ಹೇ ಕೇ ಸರಿ ಇದೆ ಎಂದು ಒಪ್ಪಿದ ಮೇರೆಗೆ,

ಎಂಟನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಮೈಸೂರು, ಹುಣಸೂರು ಪೀಠ.